ಪ್ರಾರಂಭಗೊಂಡರೂ ಇವತ್ತಿನವರೆವಿಗೂ ಪೂರ್ಣಗೊಂಡಿಲ್ಲ. ಇದಕ್ಕೆ ಸಚಿವರು ಉತ್ತರದಲ್ಲಿ ಇನ್ನೂ 78 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಿಲ್ಲವೆಂದು ಹೇಳುತ್ತಾರೆ. ತಾವು ಕೇವಲ 10 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡುವುದು ಸರಿಯಲ್ಲ 78ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಬೇಕು ಎಂದು ಈ ಮೂಲಕ ತಮ್ಮನ್ನು ಒತ್ತಾಯ ಮಾಡುತ್ತೇನೆ.

ಶ್ರೀ ಕೆ. ಎಂ. ಕೃಷ್ಣರೆಡ್ಡಿ : ಜಿಲ್ಲಾ ಮಟ್ಟದಲ್ಲಿ ಕೆಲವು ಕಡೆ ಸರ್ಕಾರದ ಆದೇಶ ಇಲ್ಲದಿದ್ದರೂ ಅವರದೇ ಆದ ಅಂದಾಜು ವೆಚ್ಚವನ್ನು ಅವರೇ ಮಾಡಿಕೊಂಡಿದ್ದಾರೆ. ನಾವು ಎಲ್ಲಾ ಕ್ಷೇತ್ರಗಳಿಗೂ ಐದು ಲಕ್ಷ ರೂಪಾಯಿಗಳನ್ನು ಮಂಜೂರು ಮಾಡಿದ್ದೇವೆ, ವಿಶೇಷವಾಗಿ ಹತ್ತು ಲಕ್ಷ ರೂಪಾಯಿಗಳನ್ನು ಕೊಡುತ್ತಿದ್ದೇವೆ. ಇದಕ್ಕೇನು ಕಾರಣ ಎಂದರೆ, ಕೆಲವು ಜಿಲ್ಲೆಗಳಲ್ಲಿ ಬೇರೆ ಬೇರೆ ವಲಯಗಳಿಂದ ಹಣವನ್ನು ತೆಗೆದುಕೊಂಡು ಒಂದು ಕೋಟಿ ರೂಪಾಯಿ ವೆಚ್ಚದಲ್ಲಿ ಅಂದಾಜನ್ನು ಮಾಡಿದ್ದಾರೆ. ನಮ್ಮಲ್ಲಿ ಹಣ ಇಲ್ಲ. ಅವರು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯಿತಿಯಿಂದ ತಾಲ್ಲೂಕು ಪಂಚಾಯಿತಿಯಿಂದ ಬೇರೆ ಬೇರೆ ಸಂಸ್ಥೆಗಳಿಂದ ಹಣವನ್ನು ಕ್ರೋಢೀಕರಣ ಮಾಡಿ ಒಂದು ಯೋಜನೆಯನ್ನು ಮಾಡಿಕೊಂಡಿದ್ದಾರೆ. ನಾವು ಹತ್ತು ಲಕ್ಷ ಅನುದಾನವನ್ನು ಕೊಟ್ಟಿದ್ದೇವೆ. ಮಳಿಗೆಗಳನ್ನು ಕಟ್ಟಬೇಕು ಎಂದಾದ ಮೇಲೆ ಸರ್ಕಾರದ ವತಿಯಿಂದ 10 ಲಕ್ಷ ರೂಪಾಯಿಗಳನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಹುಬ್ಬಳ್ಳಿಯ ಆನಂದ ನಗರಕ್ಕೆ ಕುಡಿಯುವ ನೀರಿನ ಸೌಲಭ್ಯ

245 (1544)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ-ಗ್ರಾಮೀಣ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

1) ಹುಬ್ಬಳ್ಳಿ ನಗರದ ದೊಡ್ಡ ಕೊಳಚೆ ಪ್ರದೇಶವಾದ ಆನಂದ ನಗರದ ಬಡಜನತೆ ಕುಡಿಯುವ ನೀರಿನ ಪೂರೈಕೆ ಇಲ್ಲದೆ ಬವಣೆ ಅನುಭವಿಸುತ್ತಿದ್ದು ಈ ಆನಂದ ನಗರಕೆರೆ ಕುಡಿಯುವ ನೀರು ಸರಬರಾಜು ಯೋಜನೆ ಕರಡು ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ?
2) ಹಾಗಿದ್ದಲ್ಲಿ ಅದನ್ನು ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ. ಎಂ. ಎಸ್. ಪಾಟೀಲ್ (ನಗರಾಭಿವೃದ್ಧಿ ಸಚಿವರು.):

1) ಹೌದು

2) ಹುಬ್ಬಳ್ಳಿ ನಗರದ ಆನಂದ ನಗರದ ಪ್ರದೇಶಕ್ಕೆ ನೀರಸಾಗರ ನೀರು ಸರಬರಾಜು ಯೋಜನೆಯ ಮುಖ್ಯ ಕೊಳವೆಯಿಂದ 1900ಮೀ. ಉದ್ದದ ಹೊಸ ಪಿ.ವಿ.ಸಿ.ಕೊಳವೆ ಮಾರ್ಗವನ್ನು ಆನಂದನಗರ ಪ್ರದೇಶದಲ್ಲಿರುವ ಹಾಲಿ ಇರುವ ಎರಡು ಒಂದು ಲಕ್ಷದ ಗ್ಯಾಲನ್ ಸಾಮರ್ಥ್ಯದ ಜಲಸಂಗ್ರಹಾಗಾರ ದವರೆಗೆ ಅಳವಡಿಸಿ, ಸದರಿ ನಗರದ ಜನತೆಗೆ ನೀರೊದಗಿಸಲು ರೂ. 9.90ಲಕ್ಷದ ಅಂದಾಜನ್ನು 1999-2000ರ ವಿಶೇಷ ಘಟಕ ಯೋಜನೆಯಡಿ ಕೈಗೊಳ್ಳಲು ಅನುಮೋದನೆ ನೀಡಲಾಗಿದ್ದು ಕಾಮಗಾರಿಯನ್ನು ಸಧ್ಯದಲ್ಲೇ ಕೈಗೆತ್ತುಕೊಳ್ಳಲಾಗುವುದು.

ಶ್ರೀ ಜಗದೀಶ್ ಶೆಟ್ಟರ್ :- ಹುಬ್ಬಳ್ಳಿಯಲ್ಲಿ ಆನಂದ ನಗರ ಎನ್ನುವುದು ಬಹಳ ದೊಡ್ಡ ಕೊಳಚೆ ಪ್ರದೇಶ. ಈ ಒಂದು ಪ್ರದೇಶಕ್ಕೆ ಕುಡಿಯುವ ನೀರು ಸರಬರಾಜು ಮಾಡಬೇಕು ಎಂದು ಪ್ರಶ್ನೆ

ಕೇಳಿದ್ದಕ್ಕೆ ಮಾನ್ಯ ಸಚಿವರು ಇದಕ್ಕೆ ಒಪ್ಪಿಕೊಂಡಿದ್ದಾರೆ. ಸದರಿ ನಗರದ ಜನತೆಗೆ ನೀರೊದಗಿಸಲು ರೂ.9.90 ಲಕ್ಷದ ಅಂದಾಜನ್ನು 1999-2000ರ ವಿಶೇಷ ಘಟಕ ಯೋಜನೆಯಡಿ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ ಎಂದು ಉತ್ತರದಲ್ಲಿ ಹೇಳಿದ್ದಾರೆ. ಈ ಅನುಮೋದನೆ ಕೊಟ್ಟಿದ್ದಕ್ಕಾಗಿ ಮಾನ್ಯ ಸಚಿವರನ್ನು ನಾನು ಈ ಸಂದರ್ಭದಲ್ಲಿ ಅಭಿನಂದಿಸುತ್ತೇನೆ. ಈ ಯೋಜನೆಯನ್ನು ಆದಷ್ಟು ಶೀಘ್ರವಾಗಿ ಅನುಷ್ಠಾನಗೊಳಿಸಬೇಕು ಎಂದು ಅವರಲ್ಲಿ ವಿನಂತಿ ಮಾಡಿಕೊಳ್ಳುತ್ತಿದ್ದೇನೆ. ಯಾವಾಗ ಅನುಷ್ಠಾನಗೊಳಿಸುತ್ತೀರಿ ಎಂಬುದನ್ನು ತಿಳಿಸಬೇಕು, ಮತ್ತೊಂದು ವಿನಂತಿ ಏನೆಂದರೆ, ಹುಬ್ಬಳಿ ನಗರದ ಕುಡಿಯುವ ನೀರಿನ ಯೋಜನೆ ಸುಮಾರು 38 ಕೋಟಿ ರೂಪಾಯಿ ಇದ್ದು ಪೈಪ್‌ಲೈನ್‌ನನ್ನು ರಿಪ್ಲೇಸ್ ಮಾಡುವಂಥಾದ್ದಾಗಿದೆ. ಮೊನ್ನೆ ಮಾನ್ಯ ಮುಖ್ಯಮಂತ್ರಿಗಳು ಹುಬ್ಬಳಿ ನಗರಕ್ಕೆ ಬಂದಾಗ 130 ಕೋಟಿ ರೂಪಾಯಿ ವೆಚ್ಚದಲ್ಲಿ ಕುಡಿಯುವ ನೀರಿಗಾಗಿ ಯೋಜನೆಯೊಂದನ್ನು ಕೊಡುತ್ತೇವೆಂದು ಹೇಳಿದ್ದಾರೆ. ಆದ್ದರಿಂದ ದಯವಿಟ್ಟು ಈ ಯೋಜನೆಯನ್ನು ಸ್ಕಾಂಕ್ಷನ್ ಮಾಡಬೇಕು ಎಂದು ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಎಂ. ಎಸ್. ಪಾಟೀಲ್ : ಯೋಜನೆಗೆ ಮಂಜೂರಾತಿ ಕೊಟ್ಟಿದ್ದಕ್ಕೆ ಮಾನ್ಯ ಸದಸ್ಯರು ನನಗೆ ಅಭಿನಂದನೆಯನ್ನು ಸಲ್ಲಿಸಿರುವುದರಿಂದ ನಾನೂ ಕೂಡ ಅವರಿಗೆ ಧನ್ಯವಾದಗಳನ್ನು ಈ ಸಂದರ್ಭದಲ್ಲಿ ಅರ್ಪಿಸುತ್ತೇನೆ. ಈ ಯೋಜನೆಯನ್ನು ಆದಷ್ಟು ಬೇಗನೆ ಪ್ರಾರಂಭ ಮಾಡುತ್ತೇವೆ ಇದರ ಬಗ್ಗೆ ಅನುಮಾನ ಬೇಡ. ಮಾನ್ಯ ಮುಖ್ಯಮಂತ್ರಿಗಳು ಏನು ಹೇಳಿದ್ದಾರೆ ಅವರಿಂದ ಅನುಮೋದನೆ ಬಂದ ತಕ್ಷಣ ಆ ದೊಡ್ಡ ಯೋಜನೆಯನ್ನು ಕೂಡ ಪ್ರಾರಂಭ ಮಾಡತಕ್ಕಂಥ ಒಂದು ವ್ಯವಸ್ಥೆಯನ್ನು ಮಾಡುತ್ತೇವೆ.

ಮೈಸೂರು ಮಹಾನಗರ ಪಾಲಿಕೆಯ ಆಸ್ತಿ ತೆರಿಗೆಯನ್ನು ಏರಿಸಿರುವುದರ ಬಗ್ಗೆ

246 (1595)

ಶ್ರೀ ಇ. ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಪೌರಾಡಳಿತ ರಾಜ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

(ಅ) ಮೈಸೂರು ಮಹಾನಗರ ಪಾಲಿಕೆ ಆಸ್ತಿ ತೆರಿಗೆಯನ್ನು 10 ಪಟ್ಟು ಹೆಚ್ಚಿಸಿದ್ದು ನಗರದ ಸಾರ್ವಜನಿಕರು ಹೆಚ್ಚಿಸಿದ ಮನೆ ಕಂದಾಯ ವಿರೋಧಿಸಿ ಪ್ರತಿಭಟನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು?

ಶ್ರೀ ಮಿರಾಜುದ್ದೀನ್ ಎನ್ ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

(ಅ) ಮೈಸೂರು ಮಹಾನಗರ ಪಾಲಿಕೆಯವರು ತೆರಿಗೆಯನ್ನು ಪರಿಷ್ಕರಿಸಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆ. ಇದರಿಂದ ಸ್ವಲ್ಪ ಜನತೆಗೆ ತೊಂದರೆಯಾಗಿದ್ದು ಅವರು ಪ್ರತಿಭಟಿಸುತ್ತಿದ್ದಾರೆ.

(ಆ) ಈಗಾಗಲೇ ಮಹಾನಗರ ಪಾಲಿಕೆ ಕಂದಾಯ ಪರಿಷ್ಕರಣೆಯನ್ನು ತಾತ್ಕಾಲಿಕವಾಗಿ ತಡೆಹಿಡಿದಿದೆ. ಹಾಗೂ ಮಾನ್ಯ ಮಹಾಪೌರರು ಮೈಸೂರು ಸಿಟಿ ಕಾರ್ಪೊರೇಷನ್, ಇವರ ಅಧ್ಯಕ್ಷತೆಯಲ್ಲಿ ಒಂದು ಸದನ ಸಮಿತಿಯನ್ನು ನೇಮಿಸಿದ್ದು, ಈ ರೀತಿ ಹೆಚ್ಚಳವಾಗಿರುವ ಹಾಗೂ ವರ್ಗೀಕರಣದ ಬಗ್ಗೆ ಉಂಟಾಗಿರುವ ನ್ಯೂನತೆಗಳನ್ನು ಪರಿಶೀಲಿಸಲು ಕ್ರಮ ಕೈಗೊಳ್ಳಲಾಗಿದೆ.